# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 933

2) ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರ)

3) ಉತ್ತರಿಸಬೇಕಾದ ದಿನಾಂಕ : 11-03-2026

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಮೀನುಗಾರಿಕಾ ಅಭಿವೃದ್ಧಿ ನಿಗಮ ವತಿಯಿಂದ ಏರ್ ಆಂಬುಲೆನ್ಸ್ ಅನ್ನು ಮೀನುಗಾರರ ಸುರಕ್ಷತೆಗಾಗಿ ತರುವುದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದರೂ ಈವರೆಗೆ ಅನುಷ್ಠಾನಗೊಳಿಸದೆ ಇರಲು ಕಾರಣವೇನು; ಇದಕ್ಕೆ ತಗಲುವ ವೆಚ್ಚವೆಷ್ಟು; (ವಿವರ ಒದಗಿಸುವುದು) | ಕರ್ನಾಟಕ ರಾಜ್ಯ ಮೀನುಗಾರಿಕಾ ಅಭಿವೃದ್ಧಿ ನಿಗಮ ವತಿಯಿಂದ ಏರ್ ಆಂಬುಲೆನ್ಸ್ ಅನ್ನು ಮೀನುಗಾರರ ಸುರಕ್ಷತೆಗಾಗಿ ತರುವುದಾಗಿ ಬಜೆಟ್‌ನಲ್ಲಿ ಘೋಷಣೆಯಾಗಿರುವುದಿಲ್ಲ. |
| ಆ) | ಏರ್ ಆಂಬುಲೆನ್ಸ್ ಅಳವಡಿಸುವ ಮೂಲಕ ಮೀನುಗಾರರಿಗೆ ರಕ್ಷಣೆ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; (ವಿವರ ಒದಗಿಸುವುದು) | ಉದ್ಭವಿಸುವುದಿಲ್ಲ. |
| ಇ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೀನುಗಾರರ ರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು; ಪರ್ಯಾಯವಾಗಿ ಅವರಿಗೆ ವಿಮಾ ಸೌಲಭ್ಯವನ್ನು ಒದಗಿಸಲಾಗಿದೆಯೇ? (ವಿವರ ಒದಗಿಸುವುದು) | ಕೇಂದ್ರ ಪುರಸ್ಕೃತ ಫಲಾನುಭವಿಯೇತರ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಯಾಂತ್ರೀಕೃತ ಮತ್ತು ಮೋಟಾರೀಕೃತ ದೋಣಿಗಳಿಗೆ ದ್ವಿಮುಖ ಸಂವಹನ ಸಾಧನವನ್ನು ಅಳವಡಿಸಲಾಗುತ್ತಿದೆ. ಇದರಿಂದ ಮೀನುಗಾರರಿಗೆ ತುರ್ತು ಸಂದರ್ಭದಲ್ಲಿ ಮತ್ತು ಹವಾಮಾನ ವೈಪರೀತ್ಯಗಳ ಸಂದೇಶಗಳನ್ನು ಮುನ್ನೆಚ್ಚರಿಕೆ ಕ್ರಮವಾಗಿ ರವಾನಿಸಬಹುದಾಗಿದೆ. ಅಲ್ಲದೆ, ಇದರಿಂದ ಮೀನುಗಾರರು ಆಪತ್ತಿನ ಸಮಯದಲ್ಲಿ / ತುರ್ತು ಸಂದರ್ಭದಲ್ಲಿ ಸಹಾಯಕ್ಕಾಗಿ ಸಂಬಂಧಿಸಿದ ಇಲಾಖೆಗಳನ್ನು ಸಂಪರ್ಕಿಸಬಹುದಾಗಿದೆ. ಇದರಿಂದ ಆಪತ್ತಿನಲ್ಲಿರುವ ಮೀನುಗಾರರನ್ನು ರಕ್ಷಿಸಲು ಅಗತ್ಯ ಕ್ರಮವಹಿಸಬಹುದು. |

| | | |
|---|---|---|
| | | ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 1380 ಯಾಂತ್ರೀಕೃತ ದೋಣಿಗಳಿಗೆ ಮತ್ತು 688 ಮೋಟಾರೀಕೃತ ದೋಣಿಗಳಿಗೆ ದ್ವಿಮುಖ ಸಂವಹನ ಸಾಧನಗಳನ್ನು ಅಳವಡಿಸಲಾಗಿದೆ.<br><br>ಮೀನುಗಾರರಿಗೆ ಸಾಮೂಹಿಕ ಅಪಘಾತ ವಿಮಾ ಯೋಜನೆಯ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಅಲ್ಲದೆ, ಅವಘಡ ಸಂಭವಿಸಿದಲ್ಲಿ ದೋಣಿ / ಬಲೆ ಹಾನಿಗೆ ಮತ್ತು ಮೀನುಗಾರರು ಮೀನುಗಾರಿಕೆ ಸಮಯದಲ್ಲಿ ಮೃತರಾದಲ್ಲಿ ಮೃತರ ವಾರಸುದಾರರಿಗೆ ಮೀನುಗಾರರ ಸಂಕಷ್ಟ ಪರಿಹಾರ ನಿಧಿಯಿಂದ ಪರಿಹಾರ ಒದಗಿಸಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-54 ಮೀಇಯೋ 2026

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು